**All India Radio: Bangalore**
**National Bulletin In Kannada**
**06.03.2025 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಪ್ರಧಾಮಂತ್ರಿ ನರೇಂದ್ರ ಮೋದಿ ಇಂದು ಉತ್ತರಾಖಂಡ್‌ಗೆ ಭೇಟಿ : ಹಲವು ಕಾರ್ಯಕ್ರಮಗಳಲ್ಲಿ ಭಾಗಿ
2. ಭಾರತೀಯ ಸಾಮಾಜಿಕ ಸುರಕ್ಷತಾ ವ್ಯಾಪ್ತಿ ಶೇಕಡ ೪೮.ಲಕ್ಕೆ ಏರಿಕೆ - ಮನ್ಸುಖ್ ಮಾಂಡವೀಯ
3. ಭಾರತಕ್ಕೆ ನವೋದ್ಯಮದಲ್ಲಿ ಜಾಗತಿಕವಾಗಿ ೩ನೇ ಶ್ರೇಯಾಂಕ - ಡಾ. ಜಿತೇಂದ್ರ ಸಿಂಗ್
4. ದೆಹಲಿಯಲ್ಲಿ ಇದೇ ೨೦ರಿಂದ ೨೭ರವರೆಗೆ ಖೇಲೋ ಇಂಡಿಯಾ ಪ್ಯಾರಾ ಕ್ರೀಡಾಕೂಟ
5. ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ : ಫೈನಲ್ ತಲುಪಿದ ನ್ಯೂಜಿಲೆಂಡ್ : ಪ್ರಶಸ್ತಿಗಾಗಿ ಇದೇ ೯ ರಂದು ಭಾರತದ ವಿರುದ್ಧ ಸೆಣಸು

<><><><>

ಪ್ರಧಾನಿ ನರೇಂದ್ರ ಮೋದಿ ಇಂದು ಉತ್ತರಾಖಂಡಕ್ಕೆ ಭೇಟಿ ನೀಡಲಿದ್ದಾರೆ. ಮುಖ್ವಾದಲ್ಲಿರುವ ಮಾತೆಗಂಗೆಯ ಪೂಜೆ ಮತ್ತು ದರ್ಶನ ಪಡೆಯಲಿದ್ದಾರೆ. ಇದೇ ವೇಳೆ ಪ್ರಧಾನಮಂತ್ರಿ ಅವರು ಪಾದಯಾತ್ರೆ ಮತ್ತು ಬೈಕ್ ರ‍್ಯಾಲಿಗೆ ಚಾಲನೆ ನೀಡಲಿದ್ದಾರೆ ಮತ್ತು ಹರ್ಸಿಲ್‌ನಲ್ಲಿ ನಡೆಯುವ ಸಾರ್ವಜನಿಕ ಸಮಾರಂಭದಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಉತ್ತರಾಖಂಡ ಸರ್ಕಾರ ಈ ವರ್ಷ ಚಳಿಗಾಲದ ಪ್ರವಾಸೋದ್ಯಮ ಕಾರ್ಯಕ್ರಮವನ್ನು ಆರಂಭಿಸಿದೆ. ಸಾವಿರಾರು ಭಕ್ತರು ಈಗಾಗಲೇ ಗಂಗೋತ್ರಿ, ಯಮುನೋತ್ರಿ, ಕೇದಾರನಾಥ ಮತ್ತು ಬದರಿನಾಥದ ದೇವಸ್ಥಾನಗಳಿಗೆ ಭೇಟಿ ನೀಡಿದ್ದಾರೆ. ಧಾರ್ಮಿಕ ಪ್ರವಾಸೋದ್ಯಮವನ್ನು ಉತ್ತೇಜಿಸುವುದು ಮತ್ತು ಸ್ಥಳೀಯ ಆರ್ಥಿಕತೆ, ಹೋಂಸ್ಟೇಗಳು, ಪ್ರವಾಸೋದ್ಯಮ ವ್ಯವಹಾರಗಳು ಸೇರಿದಂತೆ ಇತರೆ ಉಪಕ್ರಮಗಳನ್ನು ಉತ್ತೇಜಿಸುವ ಗುರಿಯನ್ನು ಈ ಕಾರ್ಯಕ್ರಮ ಹೊಂದಿದೆ.

<><><><>

ಸರ್ಕಾರವು ಮೂಲಸೌಕರ್ಯ ಮತ್ತು ಕೈಗಾರಿಕೆಗಳ ಜೊತೆಗೆ ಜನರು, ಆರ್ಥಿಕತೆ ಮತ್ತು ನಾವೀನ್ಯತೆಗೂ ಹೂಡಿಕೆಯ ವಿಷಯದಲ್ಲಿ ಆದ್ಯತೆ ನೀಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ

ಹೇಳಿದ್ದಾರೆ. ಉದ್ಯೋಗದ ಕುರಿತು ಬಜೆಟ್ ನಂತರದ ವೆಬಿನಾರ್‌ನಲ್ಲಿ ಮಾತನಾಡಿದ ಅವರು ಜನರಲ್ಲಿ ಹೂಡಿಕೆ ಮಾಡುವ ದೂರದೃಷ್ಟಿಯು. ಶಿಕ್ಷಣ, ಕೌಶಲ್ಯ ಮತ್ತು ಆರೋಗ್ಯ ರಕ್ಷಣೆ ಈ ಮೂರು ಆಧಾರಗಳ ಮೇಲೆ ನಿಂತಿದೆ. ಹಲವಾರು ದಶಕಗಳ ನಂತರ ಭಾರತದ ಶಿಕ್ಷಣ ವ್ಯವಸ್ಥೆಯು ಗಮನಾರ್ಹ ಬದಲಾವಣೆಗೆ ಒಳಗಾಗುತ್ತಿದೆ ಎಂದು ಹೇಳಿದರು. ರಾಷ್ಟ್ರದ ಭವಿಷ್ಯವನ್ನು ನಾವೀನ್ಯತೆಯಲ್ಲಿ ಹೂಡಿಕೆ ಮಾಡುವುದರಿಂದ ನಿರ್ಧರಿಸಲಾಗುತ್ತದೆ. ಕೃತಕ ಬುದ್ಧಿಮತ್ತೆಯು ಭಾರತದ ಆರ್ಥಿಕತೆಗೆ ಹಲವಾರು ಲಕ್ಷ ಕೋಟಿ ರೂಪಾಯಿಗಳನ್ನು ಕೊಡುಗೆ ನೀಡುವ ಸಾಮರ್ಥ್ಯವನ್ನು ಹೊಂದಿದೆ. ಆ ನಿಟ್ಟಿನಲ್ಲಿ ತ್ವರಿತ ಪ್ರಗತಿಯ ಅಗತ್ಯತೆಯನ್ನು ಪ್ರತಿಪಾದಿಸಿದ ಅವರು, ಕೃತಕಬುದ್ಧಿಮತ್ತೆ, ಆಧಾರಿತ, ಶಿಕ್ಷಣ ಮತ್ತು ಸಂಶೋಧನೆಗಾಗಿ ಬಜೆಟ್‌ನಲ್ಲಿ ೫೦೦ ಕೋಟಿ ರೂಪಾಯಿ ಮೀಸಲಿರಿಸಲಾಗಿದೆ ಎಂದರು. ಟೆಲಿಮೆಡಿಸಿನ್ ಸೌಲಭ್ಯವನ್ನು ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ವಿಸ್ತರಿಸಲಾಗುತ್ತಿದೆ ಎಂದು ಪ್ರಧಾನಿ ಹೇಳಿದರು. ಡೇ-ಕೇರ್ ಕ್ಯಾನ್ಸರ್ ಕೇಂದ್ರಗಳು ಮತ್ತು ಡಿಜಿಟಲ್ ಆರೋಗ್ಯ ಮೂಲಸೌಕರ್ಯದ ಮೂಲಕ, ಸರ್ಕಾರವು ಗುಣಮಟ್ಟದ ಆರೋಗ್ಯ ರಕ್ಷಣೆಯನ್ನು ಕೊನೆಯ ಹಂತದವರೆಗೆ ಕೊಂಡೊಯ್ಯುತ್ತದೆ ಎಂದರು.

ಧ್ವನಿ : ಪ್ರಧಾನಮಂತ್ರಿ ನರೇಂದ್ರ ಮೋದಿ (೨೦ ಸೆಕೆಂಡ್‌ಗಳು)

<><><><>

ಭಾರತದ ಸಾಮಾಜಿಕ ಭದ್ರತಾ ವ್ಯಾಪ್ತಿ ಶೇ. ೨೪.೪ ರಿಂದ ಶೇ. ೪೮.೮ ಕ್ಕೆ ದ್ವಿಗುಣಗೊಂಡಿದೆ ಎಂದು ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ. ಮನ್ಸುಖ್ ಮಾಂಡವಿಯ ಹೇಳಿದ್ದಾರೆ. ಜನರಲ್ಲಿ ಹೂಡಿಕೆ' ಎಂಬ ವಿಷಯದ ಕುರಿತು ಬಜೆಟ್ ನಂತರದ ವೆಬಿನಾರ್ ಉದ್ದೇಶಿಸಿ ಮಾತನಾಡಿದ ಸಚಿವರು, ಒಂದು ರಾಷ್ಟ್ರದ ದೊಡ್ಡ ಆಸ್ತಿ ಅದರ ಜನರು ಎಂದು ಒತ್ತಿ ಹೇಳಿದರು. ಹತ್ತು ಹೊಸ ನೌಕರರ ರಾಜ್ಯ ವಿಮಾ ನಿಗಮ -ಇಎಸ್‌ಐಸಿ ವೈದ್ಯಕೀಯ ಕಾಲೇಜುಗಳನ್ನು ಅನುಮೋದಿಸಲಾಗಿದೆ, ಇನ್ನೂ ೧೦ ಕಾಲೇಜುಗಳನ್ನು ಆರಂಭಿಸುವ ಯೋಜನೆಗಳಿವೆ ಎಂದು ಅವರು ಹೇಳಿದರು. ಭಾರತದ ಯುವಜನತೆಗೆ ಕೌಶಲ್ಯ ತುಂಬಿ ಅವರನ್ನು ಸಬಲೀಕರಣಗೊಳಿಸುವುದು ಸರ್ಕಾರದ ಧ್ಯೇಯವಾಗಿದೆ. ಭಾರತೀಯ ಪ್ರತಿಭೆ ಜಾಗತಿಕವಾಗಿ ಪರಿಣಾಮ ಬೀರುತ್ತದೆ. ೨೦೧೪-೨೪ರ ನಡುವೆ ೧೭.೧ ಕೋಟಿ ಉದ್ಯೋಗಗಳು ಸೃಷ್ಟಿಯಾಗಿವೆ, ಇದರಲ್ಲಿ ಕಳೆದ ವರ್ಷವೊಂದರಲ್ಲೇ ೪.೬ ಕೋಟಿ ಉದ್ಯೋಗಗಳು ಸೇರಿವೆ. ೨೦೪೭ ರ ವೇಳೆಗೆ

ವಿಕಸಿತ ಭಾರತ ಮಾರ್ಗಸೂಚಿಯನ್ನು ಅವರು ಪ್ರಸ್ತಾಪಿಸಿದರು. ಜನರಲ್ಲಿ ಹೂಡಿಕೆ ಮಾಡುವುದು ಕೇವಲ ಆರ್ಥಿಕ ನಿರ್ಧಾರವಲ್ಲ, ಆದರೆ ವಿದ್ಯಾವಂತ, ಆರೋಗ್ಯಕರ ಮತ್ತು ಸಬಲೀಕೃತ ಸಮಾಜದ ಕಡೆಗೆ ಸಾಮಾಜಿಕ, ನೈತಿಕ ಮತ್ತು ಸಾಂಸ್ಕತಿಕ ಬದ್ಧತೆಯಾಗಿದೆ ಎಂದು ಮಾಂಡವಿಯ ಹೇಳಿದರು.

<><><><>

ಭಾರತವನ್ನು ಜಾಗತಿಕ ನಾವೀನ್ಯತೆಯ ತಾಣವನ್ನಾಗಿ ಮಾಡಲು ಸರ್ಕಾರ ಬದ್ಧವಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ. ಅವರು, ನಾವೀನ್ಯತೆಯಲ್ಲಿ ಹೂಡಿಕೆ ಕುರಿತಂತೆ ಬಜೆಟ್ ನಂತರದ ವೆಬಿನಾರ್ ಉದ್ದೇಶಿಸಿ ಮಾತನಾಡಿ, ೨೦೨೫-೨೬ನೇ ಬಜೆಟ್‌ನಲ್ಲಿ ಸರ್ಕಾರ ಸಂಶೋಧನೆ, ಅಭಿವೃದ್ಧಿ ಮತ್ತು ನಾವೀನ್ಯತೆಗೆ ೨೦ ಸಾವಿರ ಕೋಟಿ ರೂಪಾಯಿಗಳನ್ನು ತೆಗೆದಿರಿಸಿದೆ ಎಂದರು. ಅತ್ಯಾಧುನಿಕ ಸಂಶೋಧನೆ ಮತ್ತು ತಾಂತ್ರಿಕ ಪ್ರಗತಿಗಳನ್ನು ಅಳವಡಿಸಿಕೊಳ್ಳಲಾಗುತ್ತದೆ. ನವೋದ್ಯಮಗಳ ವಲಯದಲ್ಲಿ ಕಳೆದ ದಶಕದಲ್ಲಿ ಭಾರತ ಜಾಗತಿಕ ಮಟ್ಟದಲ್ಲಿ ೩ನೇ ಶ್ರೇಯಾಂಕ ಗಳಿಸಿದೆ. ನಾವೀನ್ಯತೆಯಲ್ಲಿ ಭಾರತ ಸಾಕಷ್ಟು ಪ್ರಗತಿ ಸಾಧಿಸಿದ್ದು, ೨೦೧೪ರಲ್ಲಿ ಇದ್ದ ಪೇಟೆಂಟ್ ಪ್ರಮಾಣಕ್ಕೆ ಹೋಲಿಸಿದರೆ ಇದೀಗ ೧೭ ಪಟ್ಟು ಹೆಚ್ಚಾಗಿದೆ. ಅಂತೆಯೇ ಜಾಗತಿಕ ನಾವೀನ್ಯತಾ ಸೂಚ್ಯಂಕದಲ್ಲಿ ಭಾರತದ ಸ್ಥಾನ ೮೧ ರಿಂದ ೩೯ಕ್ಕೆ ಏರಿಕೆಯಾಗಿದೆ ಎಂದು ಅವರು ಹೇಳಿದರು. ಕೇಂದ್ರ ಸರ್ಕಾರ ನಾವೀನ್ಯತೆ ಉತ್ತೇಜನಕ್ಕೆ ಖಾಸಗಿ ವಲಯದ ಜೊತೆ ಸೇರಿ ಹಲವು ಉಪಕ್ರಮಗಳನ್ನು ಕೈಗೊಂಡಿದ್ದು, ವಿಶೇಷವಾಗಿ ಸೆಮಿಕಂಡೆಕ್ಟರ್ ಉತ್ಪಾದನೆ, ಕೃತಕಬುದ್ಧಿಮತ್ತೆ, ೫-ಜಿ ತಂತ್ರಜ್ಞಾನ ಮತ್ತು ಕ್ವಾಂಟಮ್ ಕಂಪ್ಯೂಟಿಂಗ್‌ಗೆ ವಿಶೇಷ ಒತ್ತು ನೀಡಲಾಗಿದೆ ಎಂದು ಸಚಿವರು ಹೇಳಿದರು.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ರಾಷ್ಟ್ರಪತಿ ಭವನದಲ್ಲಿ ನಿನ್ನೆ ವಾರ್ಷಿಕ ಸಾಂಸ್ಕೃತಿಕ ಉತ್ಸವ ವಿವಿಧತೆಯ ಅಮೃತ ಮಹೋತ್ಸವವನ್ನು ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ಈ ಉತ್ಸವ ದೇಶದ ನಾನಾ ಭಾಗಗಳ ವೈವಿಧ್ಯಮಯ ಸಂಸ್ಕೃತಿ ಮತ್ತು ಆಚರಣೆಯನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು. ಜನರು ಇಂತಹ ಸಾಂಸ್ಕೃತಿಕ ಉತ್ಸವಗಳಲ್ಲಿ ಭಾಗವಹಿಸುವ ಮೂಲಕ ಕಲಾವಿದರನ್ನು ಉತ್ತೇಜಿಸಬೇಕು ಎಂದು ಅವರು ಈ ಉತ್ಸವದಲ್ಲಿ ೫೦೦ಕ್ಕೂ ಅಧಿಕ ಕಲಾವಿದರು ಪಾಲ್ಗೊಂಡಿದ್ದಾರೆ. ಜೊತೆಗೆ ಕರಕುಶಲಕರ್ಮಿಗಳು ಹಾಗೂ ನೇಕಾರರು ಸಹ ಭಾಗವಹಿಸಿ ತಮ್ಮ ಉತ್ಪನ್ನಗಳನ್ನು ಪ್ರದರ್ಶಿಸುತ್ತಿದ್ದಾರೆ ಎಂದು ತಿಳಿಸಿದರು. ಈ ವರ್ಷದ

ಉತ್ಸವದಲ್ಲಿ ದಕ್ಷಿಣ ಭಾರತದ ಕರ್ನಾಟಕ, ಕೇರಳ, ತಮಿಳುನಾಡು, ತೆಲಂಗಾಣ ಮತ್ತು ಆಂಧ್ರಪ್ರದೇಶಗಳ ಕಲೆ, ಸಂಸ್ಕೃತಿಗಳಿಗೆ ಒತ್ತು ನೀಡಲಾಗಿದೆ.

ಧ್ವನಿ : ರಾಷ್ಟ್ರಪತಿ ದ್ರೌಪದಿ ಮುರ್ಮು (೩೧ ಸೆಕೆಂಡ್‌ಗಳು)

<><><><>

ಉತ್ತರಾಖಂಡ್‌ನಲ್ಲಿ ಎರಡು ರೋಪ್‌ವೇ ಯೋಜನೆಗಳಿಗೆ ಸಚಿವ ಸಂಪುಟ ಒಪ್ಪಿಗೆ ನೀಡಿರುವುದನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಶ್ಲಾಘಿಸಿದ್ದಾರೆ. ಅವರು, ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಬಾಬಾ ಕೇದಾರನಾಥ ಮತ್ತು ಹೇಮಕುಂಡ್ ಸಾಹೀಬ್‌ಗೆ ಭೇಟಿ ನೀಡುವ ಭಕ್ತರಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ನೀಡಿರುವ ಬಹುದೊಡ್ಡ ಉಡುಗೊರೆ ಇದಾಗಿದೆ. ಇದರಿಂದ ಭಕ್ತರು ಈ ಎರಡೂ ಸ್ಥಳಗಳಿಗೆ ಸುರಕ್ಷಿತವಾಗಿ ಭೇಟಿ ನೀಡಲು ಸಾಧ್ಯವಾಗುತ್ತದೆ. ಜೊತೆಗೆ ಇದು ಪ್ರವಾಸೋದ್ಯಮ ಮತ್ತು ಉದ್ಯೋಗಸೃಷ್ಟಿಯನ್ನು ಉತ್ತೇಜಿಸುತ್ತದೆ ಎಂದು ಹೇಳಿದ್ದಾರೆ.

<><><><>

ಕೇಂದ್ರ ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವೀಯ ದೆಹಲಿಯಲ್ಲಿ ಇದೇ ೨೦ರಿಂದ ೨೭ರವರೆಗೆ ಖೇಲೋ ಇಂಡಿಯಾ ಪ್ಯಾರಾ ಕ್ರೀಡಾಕೂಟ ನಡೆಯಲಿದೆ ಎಂದು ಪ್ರಕಟಿಸಿದ್ದಾರೆ. ಈ ಕ್ರೀಡಾಕೂಟದಲ್ಲಿ ಹಲವು ಪ್ರಮುಖ ಕ್ರೀಡಾಪಟುಗಳು ಭಾಗವಹಿಲಿಸದ್ದಾರೆ. ಇದು ಖೇಲೋ ಇಂಡಿಯಾ ಪ್ಯಾರಾ ಕ್ರೀಡಾಕೂಟದ ೨ನೇ ಆವೃತ್ತಿಯಾಗಿರಲಿದೆ. ೬ ವಿಭಾಗಗಳಲ್ಲಿ ಸುಮಾರು ೧೩೦ಕ್ಕೂ ಅಧಿಕ ಪ್ಯಾರಾ ಅಥ್ಲಿಟ್‌ಗಳು ಪದಕಗಳಿಗಾಗಿ ಸೆಣಸಲಿದ್ದಾರೆ. ದೆಹಲಿಯ ಜವಹಾರ್‌ಲಾಲ್ ನೆಹರು ಕ್ರೀಡಾಂಗಣದಲ್ಲಿ ಪ್ಯಾರಾ ಅಥ್ಲಿಟಿಕ್ಸ್, ಪ್ಯಾರಾ ಆರ್ಚರಿ ಮತ್ತು ಪ್ಯಾರಾ ಪವರ್ ಲಿಫ್ಟಿಂಗ್ ಕ್ರೀಡೆಗಳು ನಡೆಯಲಿವೆ.

ಧ್ವನಿ : ಮನ್ಸುಖ್ ಮಾಂಡವೀಯ (೧೯ ಸೆಕೆಂಡ್‌ಗಳು)

<><><><>

ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೇತೃತ್ವದ ಅಮೆರಿಕದ ಆಡಳಿತವು ಭಾರತದ ಹಿತಾಸಕ್ತಿಗಳಿಗೆ ಹೊಂದುವಂತಹ ಬಹುಧ್ರುವೀಯತೆಯತ್ತ ಸಾಗುತ್ತಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ.  ಅಧ್ಯಕ್ಷ ಟ್ರಂಪ್ ನೇತೃತ್ವದಲ್ಲಿ ಅಮೆರಿಕದ ವಿದೇಶಾಂಗ ನೀತಿ ಬದಲಾವಣೆಯನ್ನು ನಿರೀಕ್ಷಿಸಲಾಗಿತ್ತು ಮತ್ತು ಅದು ಭಾರತಕ್ಕೆ ಹಲವು ವಿಧಗಳಲ್ಲಿ ಸರಿಹೊಂದುತ್ತದೆ ಎಂದರು. ನಿನ್ನೆ ಸಂಜೆ ಲಂಡನ್‌ನ ಚಾಥಮ್ ಹೌಸ್ ಚಿಂತಕರ ಚಾವಡಿಯಲ್ಲಿ 'ವಿಶ್ವದಲ್ಲಿ ಭಾರತದ

ಏರಿಕೆ ಮತ್ತು ಪಾತ್ರ' ಎಂಬ ಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಬದಲಾಗುತ್ತಿರುವ ಭೌಗೋಳಿಕ ರಾಜಕೀಯ ಪರಿಸ್ಥಿತಿಗಳಿಂದಾಗಿ ಇಂಧನ, ತಂತ್ರಜ್ಞಾನ ಮತ್ತು ಸಂಪರ್ಕ ವಲಯಗಳಲ್ಲಿ ಬೆಳವಣಿಗೆಗಳಾಗುತ್ತಿವೆ. ಅಮೆರಿಕದ ಅಧ್ಯಕ್ಷರು ಮತ್ತು ಅವರ ಆಡಳಿತದ ಹಲವಾರು ಆದ್ಯತೆಗಳು ಭಾರತಕ್ಕೆ ಭರವಸೆ ನೀಡುತ್ತಿವೆ ಎಂದು ಹೇಳಿದರು. ಸುಂಕಗಳ ವಿಷಯದ ಕುರಿತು, ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಪ್ರಸ್ತುತ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ಕುರಿತು ಚರ್ಚಿಸಲು ವಾಷಿಂಗ್ಟನ್‌ನಲ್ಲಿದ್ದಾರೆ ಎಂದರು.

<><><><>

ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ - ೨೦೨೫ರ ಟೂರ್ನಿಯಲ್ಲಿ ನಿನ್ನೆ ರಾತ್ರಿ ಲಾಹೋರ್‌ನ ಗಡಾಫಿ ಕ್ರೀಡಾಂಗಣದಲ್ಲಿ ನಡೆದ ೨ನೇ ಸೆಮಿಫೈನಲ್ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡವು ದಕ್ಷಿಣ ಆಫ್ರಿಕಾ ತಂಡವನ್ನು ೫೦ ರನ್‌ಗಳಿಂದ ಸೋಲಿಸಿ ಫೈನಲ್ ಪ್ರವೇಶಿಸಿತು. ನ್ಯೂಜಿಲೆಂಡ್ ತಂಡವು ನಿಗದಿತ ೫೦ ಓವರ್‌ಗಳಲ್ಲಿ ೬ ವಿಕೆಟ್‌ಗಳ ನಷ್ಟಕ್ಕೆ ೩೬೨ ರನ್ ಗಳಿಸಿತು. ೩೬೩ ರನ್‌ಗಳ ಬೃಹತ್ ಗುರಿಯನ್ನು ಬೆನ್ನಟ್ಟಿದ ದಕ್ಷಿಣ ಆಫ್ರಿಕಾ ತಂಡವು ನಿಗದಿತ ೫೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೩೧೨ ರನ್ ಗಳಿಸಲಷ್ಟೇ ಶಕ್ತವಾಯಿತು. ಇದೇ ೯ ರಂದು ಭಾನುವಾರ ಭಾರತ ಮತ್ತು ನ್ಯೂಜಿಲೆಂಡ್ ತಂಡಗಳು ಪ್ರಶಸ್ತಿಗಾಗಿ ಸೆಣಸಲಿವೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>